# ಹಿರಿಯ ದಿವಾಣಿ ನ್ಯಾಯಾಧೀಶರು ಹಾಗೂ ಜೆ.ಎಂ.ಎಫ್.ಸಿ., ನ್ಯಾಯಾಲಯ, ನವಲಗುಂದ.

| | |
|---|---|
| ಸಿ.ಸಿ. ನಂಬರ್ | : 79/2024 |
| ಸಿ.ಡಬ್ಲ್ಯೂ | : 05 |
| ಪಿ.ಡಬ್ಲ್ಯೂ | : 05 |
| ಸಾಕ್ಷಿಯ ಹೆಸರು | : ಸೋಮಲಿಂಗಪ್ಪ ಗಂಗಪ್ಪ ಮಂಗಳಿ |
| ವಯಸ್ಸು | : 52 ವರ್ಷ |
| ಉದ್ಯೋಗ | : ಒಕ್ಕಲುತನ |
| ವಾಸ ಸ್ಥಳ | : ಭದ್ರಾಪೂರ |

ದಿನಾಂಕಃ 19/07/2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ಮಾನ್ಯ ಸ.ಸ.ಅ. ರವರಿಂದಃ-**

ಪ್ರಕರಣದ ಆರೋಪಿಯ ಪರಿಚಯವಿಲ್ಲ. ಚಾಸಾ-1 ಮತ್ತು 4 ರವರ ಪರಿಚಯ ಇಲ್ಲ. ಈ ಪ್ರಕರಣಕ್ಕೆ ಸಂಬಂಧಿಸಿ ನನಗೇನು ಮಾಹಿತಿ ಇಲ್ಲ. ಸಾಕ್ಷಿಗೆ ತಮ್ಮ ಸಹಿಯನ್ನು ತೋರಿಸಿದ್ದು, ಅದನ್ನು ನೋಡಿ ಗುರುತಿಸಿದ ಕಾರಣ ಪಂಚನಾಮೆಯನ್ನು ನಿಪಿ-2 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು **ನಿಪಿ-2(ಸಿ)** ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ಪೋಲೀಸ ಠಾಣೆಯಲ್ಲಿ ಮಾಡಿರುತ್ತೇನೆ. ಸದರಿ ಸಹಿಯನ್ನು ನಲವಡಿಯ ಹತ್ತಿರ ಸಂಭವಿಸಿದ ಅಪಘಾತಕ್ಕೆ ಸಂಬಂಧಿಸಿ ಮಾಡಿರುತ್ತೇನೆ. ಸದರಿ ಪಂಚನಾಮೆಯ ಸಮಯ ಹೇಳಲಾಗುವುದಿಲ್ಲ. ಕಚ್ಚಾ ನಕಾಶೆಯನ್ನು **ನಿಪಿ-6** ಹಾಗೂ ಸಾಕ್ಷಿಯ ಸಹಿಯನ್ನು **ನಿಪಿ-6 (ಎ)** ಎಂದು ಗುರುತಿಸಲಾಯಿತು.

(ಮಾನ್ಯ ಸ.ಸ.ಅ ರವರು ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಲು ಅನುಮತಿ ಕೊರಿದ್ದು ಅನುಮತಿ ನೀಡಲಾಯಿತು.)

**ಪಾಟೀ ಸವಾಲುಃ ಮಾನ್ಯ ಸರಕಾರಿ ಸಹಾಯಕ ಅಭಿಯೋಜಕರಿಂದ –**

ದಿಃ 04-09-2023 ರಂದು ಬೆ.10-15 ರಿಂದ 11-15 ಗಂಟೆಯವರೆಗೆ ನಲವಡಿಯ ಹತ್ತಿರ ಸಂಭವಿಸಿದ ಅಪಘಾತಕ್ಕೆ ಸಂಬಂಧಿಸಿ ನಿಪಿ-1 ರಂತೆ ನನ್ನ ಸಮಕ್ಷಮ ಪಂಚನಾಮೆ ಮಾಡಿರುತ್ತಾರೆ ಎಂದರೆ ಸರಿಯಲ್ಲ. ನನ್ನ ಸಮಕ್ಷಮ ಯಾವುದೇ ಪಂಚನಾಮೆ ಮಾಡಿರುವುದಿಲ್ಲ. ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಶ್ರೀ ಎಂ ಎಸ್ ಎಚ್ ವಕೀಲರಿಂದ**

ಏನು ಇಲ್ಲ ಎಂದು ತಿಳಿಸಿರುತ್ತಾರೆ.

**ಮರು ವಿಚಾರಣೆ ಇಲ್ಲಾ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು.)

**ಓ. ಹೇ. ಕೇ. ಸರಿ. ಇದೆ.**

**Sd/-**

**ಹಿರಿಯ ದಿವಾಣಿ ನ್ಯಾಯಾಧೀಶರು ಹಾಗೂ ಜೆ.ಎಂ.ಎಫ್.ಸಿ**

**ನವಲಗುಂದ.**